ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ

**ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು, ನೃಪತುಂಗ ರಸ್ತೆ, ಕೆ.ಆರ್.ವೃತ್ತ, ಬೆಂಗಳೂರು -1**

ಸಂಖ್ಯೆ: ಸಿ8[1ಶಾಶಿಅ ಪ್ರೌಶಾಶಿಸುತ್ತೋಲೆ 141/1/2018-19 ದಿನಾಂಕ: 18.02.2019

-: **ಜ್ಞಾಪನ** :-

**ವಿಷಯ**:-ರಾಜ್ಯದಲ್ಲಿನ ಅನುದಾನಿತ ಪ್ರೌಢಶಾಲೆಗಳಲ್ಲಿ ಖಾಲಿ ಹುದ್ದೆ ಅನುಮತಿ ಮತ್ತು ನೇಮಕಾತಿ ಅನುಮೋದನೆ ಪ್ರಕರಣಗಳನ್ನು ಆನ್‌ಲೈನ್ ಮುಖಾಂತರ ಕಾರ್ಯಗತಗೊಳಿಸುವ ಬಗ್ಗೆ.

**ಉಲ್ಲೇಖ:** 1]ಸರ್ಕಾರದ ಆದೇಶ ಸಂಖ್ಯೆ: ಇಡಿ 48 ಎಸ್.ಇ.ಪಿ 2006, ದಿನಾಂಕ: 12.01.2006.

2]ಸರ್ಕಾರದ ಆದೇಶ ಸಂಖ್ಯೆ: ಇಡಿ 14 ಎಸ್.ಇ.ಪಿ 2017, ದಿನಾಂಕ: 29.06.2017, 18.07.2017, 23.11.2017, 06.02.2018 ಮತ್ತು 25.09.2018.

3]ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ ದಿನಾಂಕ: 21.07.2017.

4]ಈ ಕಚೇರಿಯಿಂದ ದಿನಾಂಕ:13-02-2019 ರಂದು ನಡೆದ ವಿಡಿಯೋ ಸಂವಾದ ಕಾರ್ಯಕ್ರಮ

***

ರಾಜ್ಯದಲ್ಲಿನ ಅನುದಾನಿತ ಪ್ರೌಢಶಾಲೆಗಳಲ್ಲಿ ವಿವಿಧ ಕಾರಣಗಳಿಂದ ಖಾಲಿಯಾದ ಬೋಧಕ ಹುದ್ದೆಗಳನ್ನು ತುಂಬಲು ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆದು ಕ್ರಮ ವಹಿಸಲಾಗುತ್ತಿದೆ. ಆದರೆ ಖಾಲಿ ಹುದ್ದೆಗಳನ್ನು ತುಂಬಲು ಅನುಮತಿ ನೀಡುವಲ್ಲಿ ಮತ್ತು ತುಂಬಿದ ಹುದ್ದೆಗಳನ್ನು ವೇತನಾನುದಾನಕ್ಕೆ ಒಳಪಡಿಸುವಲ್ಲಿ ಸಾಕಷ್ಟು ಕಾಲವಿಳಂಬವಾಗುವುದು ಮತ್ತು ಅನಗತ್ಯವಾದ ದಾಖಲೆಗಳನ್ನು ಕೋರಿ ವಿಳಂಬ ನೀತಿಯನ್ನು ಅನುಸರಿಸುತ್ತಿರುವುದು ಇಲಾಖಾ ಗಮನಕ್ಕೆ ಬಂದಿದೆ. ಇದರ ಬಗ್ಗೆ ಸಾಕಷ್ಟು ಬಾರಿ ವಿಧಾನಮಂಡಲದ ಉಭಯ ಸದನಗಳಲ್ಲಿ ಪ್ರಶ್ನೆಗಳೂ ಆಗಿದೆ. ಈ ಹಿನ್ನೆಲೆಯಲ್ಲಿ ಖಾಲಿ ಹುದ್ದೆ ತುಂಬುವ ಮತ್ತು ಅನುಮೋದಿಸುವ ಕ್ರಮವನ್ನು ಸರಳೀಕರಣಗೊಳಿಸುವ ಸಲುವಾಗಿ ಆನ್‌ಲೈನ್ ಮೂಲಕ ಕಾರ್ಯಗತಗೊಳಿಸಲು ಇಲಾಖೆಯು ನಿರ್ಣಯಿಸಿ ಉಲ್ಲೇಖಿತ (3) ರಲ್ಲಿ ಹಂತ-01, ಹಂತ-02 ಮತ್ತು ಹಂತ 03 ರಲ್ಲಿ ಸೂಚಿಸಿರುವ ಮಾಹಿತಿಯನ್ನು ಆನ್ ಲೈನ್ ತಂತ್ರಾಂಶದಲ್ಲಿ ಅಪ್ ಲೋಡ್ ಮಡಲು ಸೂಚಿಸಲಾಗಿತ್ತು.

ದಿನಾಂಕ:13-02-2019 ರಂದು ರಾಜ್ಯದ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಉಪನಿರ್ದೇಶಕರು ಮತ್ತು ಇತರೆ ಅಧಿಕಾರಿ/ಆಡಳಿತ ಮಂಡಳಿಯೊಂದಿಗೆ ವಿಡಿಯೋ ಸಂವಾದ ಕಾರ್ಯಕ್ರಮ ತಂತ್ರಾಂಶದ ಬಳಕೆ ಬಗ್ಗೆ ಮಾಹಿತಿ ನೀಡಲಾಗಿತ್ತು. ಪ್ರಸ್ತುತ ಹಂತ-01 ರ ಮಾಹಿತಿಯನ್ನು ರಾಜ್ಯದ ಎಲ್ಲಾ ಜಿಲ್ಲಾ ವ್ಯಾಪ್ತಿಯಲ್ಲಿರುವ ಖಾಸಗಿ ಅನುದಾನಿತ ಆಡಳಿತ ಮಂಡಳಿಯವರೇ ಸ್ಯಾಟ್ಸ್ ತಂತ್ರಾಂಶದಲ್ಲಿ ಅಳವಡಿಸಬೇಕಾಗಿರುವುದರಿಂದ ದಿನಾಂಕ:25-02-2019 ರೊಳಗೆ ನಿಮ್ಮ ಜಿಲ್ಲಾ ವ್ಯಾಪ್ತಿಯ ಎಲ್ಲಾ ಖಾಸಗಿ ಶಾಲೆಗಳ ಮಾಹಿತಿಯನ್ನು ಕಡ್ಡಾಯವಾಗಿ ಸ್ಯಾಟ್ಸ್ ತಂತ್ರಾಂಶದಲ್ಲಿ ಅಳವಡಿಸಲು ಕಡೆಯ ದಿನಾಂಕವಾಗಿರುತ್ತದೆ. ಈ ಅವಧಿಯ ನಂತರ ಸೇರ್ಪಡಿಸಲು ಮತ್ತು ಮಾರ್ಪಡಿಸಲು ಅವಕಾಶವಿರುವುದಿಲ್ಲ. ಆದ್ದರಿಂದ ಈ ಬಗ್ಗೆ ಯಾವುದೇ ಆಡಳಿತ ಮಂಡಳಿಯ ಮಾಹಿತಿಯು ಸ್ಯಾಟ್ಸ್ ತಂತ್ರಾಂಶದಲ್ಲಿ ಸೇರ್ಪಡೆಗೊಳ್ಳದೆ ಇದ್ದಲ್ಲಿ ಸಂಬಂಧಿಸಿದ ಉಪನಿರ್ದೇಶಕರೇ ನೇರ ಹೊಣೆಗಾರರಾಗಿರುತ್ತಾರೆ. ಆದ್ದರಿಂದ ನಿಮ್ಮ ವ್ಯಾಪ್ತಿಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಕ್ತ ಮಾರ್ಗದರ್ಶನ ನೀಡಿ ಹಂತ ಒಂದರ ಮಾಹಿತಿಯನ್ನು ಕಾಲಮಿತಿ ಅವಧಿಯೊಳಗೆ ಪೂರ್ಣಗೊಳಿಸಲು ತಿಳಿಸಿದೆ. ನಂತರ ಕೈಗೊಂಡ ಕ್ರಮದ ಬಗ್ಗೆ ಈ ಕಚೇರಿಗೆ ಮಾಹಿತಿ ನೀಡಲು ತಿಳಿಸಿದೆ.

21/2

ನಿರ್ದೇಶಕರು(ಪ್ರೌಢ ಶಿಕ್ಷಣ)

**ಪ್ರತಿಯನ್ನು:-**

1. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ಕಲಬುರ್ಗಿ ರವರಿಗೆ ಕಳುಹಿಸುತ್ತಾ ನಿಮ್ಮ ಅಧೀನದಲ್ಲಿ ಬರುವ ಕ್ಷೇತ್ರ ಶಿಕ್ಷಣಾಧಿಕಾರಿಗಳು/ಉಪನಿರ್ದೇಶಕರಿಗೆ ನಿರ್ದೇಶನ ನೀಡಿ ಈ ಪ್ರಕ್ರಿಯೆ ಪೂರ್ಣಗೊಳಿಸಲು ಕ್ರಮ ವಹಿಸಲು ತಿಳಿಸಿದೆ.

2. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೂ ಸೂಕ್ತ ಕ್ರಮ ಹಾಗೂ ತಮ್ಮ ಅಧೀನದಲ್ಲಿ ಬರುವ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ/ಆಡಳಿತ ಮಂಡಳಿಗೆ ಸೂಚನೆ ನೀಡಿ ನಿಗಧಿತ ಸಮಯದಲ್ಲಿ ಈ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ತಿಳಿಸಿದೆ,
3. ಕಛೇರಿ ಪ್ರತಿ.